**ಚಾಸಾಃ 14 ಪ್ರಾಸಾಃ 7**

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸುಳ್ಯ, ದ.ಕ**

**ಸಿ.ಸಿ ಸಂಖ್ಯೆ:201/2025**

ಹೆಸರು :ದೇವರಾಜ್
ತಂದೆಯ ಹೆಸರು :ಬೆಳ್ಯಪ್ಪ ಗೌಡ
ಪ್ರಾಯ :52 ವರ್ಷ
ಉದ್ಯೋಗ :ಹೆಚ್ .ಸಿ 326, ಸುಳ್ಯ ಪೊಲೀಸ್ ಠಾಣೆ
ವಾಸ : ಸುಳ್ಯ

**ದಿನಾಂಕ 10.02.2026 ರಂದು ಸಾಕ್ಷಿಯನ್ನು ಕರೆಸಿ ವಿಧಿಬದ್ಧವಾಗಿ ಪ್ರಮಾಣವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ**

ನಾನು ಜೂನ್ 2024 ರಿಂದ ಸುಳ್ಯ ಪೊಲೀಸ್ ಠಾಣೆಯಲ್ಲಿ ಮುಖ್ಯಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿ. 24.11.2024 ರಂದು ನಾನು ರಾತ್ರಿ ಠಾಣಾ ಪ್ರಭಾರದಲ್ಲಿದ್ದಾಗ ಬೆಳಗಿನ ಜಾವ 1 ಗಂಟೆಗೆ ಚಾಸಾ-1 ರವರು ಪಂಚನಾಮೆ, ಮುದ್ದೆಮಾಲು ಮತ್ತು ಆರೋಪಿ ಜೊತೆ ಠಾಣೆಗೆ ಹಾಜರಾಗಿ ಅವುಗಳನ್ನು ವರದಿಯ ಜೊತೆ ನನ್ನ ಸಮಕ್ಷಮ ಹಾಜರು ಪಡಿಸಿದ್ದು, ನಾನು ಸದರಿ ವರದಿಯನ್ನು ಸ್ವೀಕರಿಸಿಕೊಂಡು ಅದನ್ನು ಠಾಣಾ ಮೊಕದ್ದಮೆ ಸಂಃ129/2024 ,ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ಮತ್ತು 34 ರಂತೆ ಪ್ರಕರಣ ದಾಖಲಿಸಿಕೊಂಡು ನ್ಯಾಯಾಲಯಕ್ಕೆ ಪ್ರ.ವ.ವರದಿಯನ್ನು ಸಲ್ಲಿಸಿರುತ್ತೇನೆ. ಸದರಿ ದೂರನ್ನು ಸಾಕ್ಷಿ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-4 ಎಂದು

ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ–4(ಬಿ) ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ನಿಪಿ–16 ಎಂದು, ಸಾಕ್ಷಿಯ ಸಹಿಯನ್ನು ನಿಪಿ–16(ಎ) ಎಂದು ಗುರುತಿಸಲಾಯಿತು.

ಪ್ರಕರಣದಲ್ಲಿ ಅಮಾನತು ಪಡಿಸಿಕೊಂಡಿದ್ದ ಮುದ್ದೆಮಾಲುಗಳಿಗೆ ಪಿ.ಎಫ್ ನಮೂದಿಸಿ ನ್ಯಾಯಾಲಯಕ್ಕೆ ವರದಿ ಮಾಡಿಕೊಂಡಿರುತ್ತೇನೆ. ಸ್ವತ್ತು ಅಮಾನತು ಪಂಚನಾಮೆ ಸಮಯದಲ್ಲಿ ಭಾವಚಿತ್ರ ತೆಗೆದ ಬಗ್ಗೆ ಚಾಸಾ–6ರವರಿಂದ ಭಾ.ಸಾ.ಅ. ಕಲಂ 63(4) ಅಡಿಯಲ್ಲಿ ಪ್ರಮಾಣ ಪತ್ರ ಪಡೆದುಕೊಂಡಿರುತ್ತೇನೆ. ಆರೋಪಿಗೆ ಕಲಂ 35(ಸಿ) ಅಡಿಯಲ್ಲಿ ನೋಟೀಸು ನೀಡಿ ಕಳುಹಿಸಿರುತ್ತೇನೆ. ಪ್ರಕರಣದಲ್ಲಿ ಅಮಾನತು ಪಡಿಸಿಕೊಂಡ ಮುದ್ದೆಮಾಲುಗಳನ್ನು ನೋಡಿ ಗುರುತಿಸುತ್ತೇನೆ ಅವುಗಳನ್ನು ಎಂ.ಒ.1 ಮತ್ತು 2 ಎಂದು ಈಗಾಗಲೇ ಗುರುತಿಸಲಾಗಿದೆ. ನಿಪಿ–10 ರಂತೆ ನೀಡಿದ 63(4) ಪ್ರಮಾಣ ಪತ್ರವನ್ನು ನೋಡುತ್ತಿದ್ದು ಅದರಲ್ಲಿ ಸಾಕ್ಷಿಯ ಸಹಿಯನ್ನು ನಿಪಿ–10(ಬಿ) ಎಂದು ಗುರುತಿಸಲಾಯಿತು. ಆರೋಪಿಯನ್ನು ಈಗ ನ್ಯಾಯಾಲಯದ ಮುಂದೆ ನೋಡಿ ಗುರುತಿಸುತ್ತೇನೆ.

ನಂತರ ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ–15 ರವರಿಗೆ ವಹಿಸಿಕೊಟ್ಟಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಂ.ವಿ.ಜಿ ವಕೀಲರಿಂದಃ**

ನಾನು ದಿ. 23.11.2024 ರಂದು ಜಪ್ತಿ ಪಂಚನಾಮೆ ಕಾಲಕ್ಕೆ ತೆಗೆದ ಭಾವಚಿತ್ರಗಳ ಕುರಿತು ಚಾಸಾ–6 ರವರಿಂದ ಪ್ರಮಾಣ ಪತ್ರ ಮತ್ತು ಪೆನ್ ಡ್ರೈವ್ ಮಾತ್ರ ಸ್ವೀಕರಿಸಿರುತ್ತೇನೆ. ಅದು ದಿ. 23.22.2024 ಕ್ಕೆ ಸಂಬಂಧಿಸಿದ್ದು ಮಾತ್ರ. ನನ್ನ ಮುಂದೆ ಹಾಜರು ಪಡಿಸಿದ ಎಲ್ಲಾ ದಾಖಲೆಗಳನ್ನು ಟೈಪ್ ಮಾಡಲಾಗಿತ್ತು. ಅವುಗಳನ್ನು ಠಾಣೆಯಲ್ಲಿ ಟೈಪ್ ಮಾಡಿಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ಮುದ್ದೆಮಾಲುಗಳನ್ನು ಒಂದು ಖಾಕಿ ಕವರಿನಲ್ಲಿ ಹಾಕಿ ಅವುಗಳ ಮೇಲೆ ಚೀಟಿ ಅಂಟಿಸಲಾಗಿತ್ತು. ಅವುಗಳ

ಮೇಲೆ ಕ್ರೈಂ ನಂಬರ್ ನಮೂದು ಮಾಡಿದ್ದಾರಾ ಇಲ್ಲವೋ ನನಗೆ ನೆನಪಿಲ್ಲ. ನಾವು ಪ್ರಕರಣವನ್ನು ದಾಖಲು ಮಾಡಿದ ನಂತರ ಕ್ರೈಂ ನಂಬರ್ ನೀಡುತ್ತೇವೆ ಎಂದರೆ ಸರಿ. ಚಾಸಾ–1 ರವರು ನನ್ನ ಮೇಲಾಧಿಕಾರಿ ಎಂದರೆ ಸರಿ. ಚಾಸಾ–1 ರವರ ಹೇಳಿಕೆಯ ಮೇರೆಗೆ ಠಾಣಾ ಅಂಕಿ ಅಂಶಗಳಿಗಾಗಿ ಸುಳ್ಳು ಪ್ರಕರಣ ದಾಖಲು ಮಾಡಿದ್ದೇವೆ ಎಂದರೆ ಸರಿಯಲ್ಲ. ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

(ಸಾ.ಓ.ಹೇ.ಕೇ.ಸ.ಇ.ಎ.ಒ)

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ಸುಳ್ಯ